ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ,
ಕುಣಿಗಲ್.

ಸಿ.ಸಿ.ನಂ. 3242-2023

ಸಿ.ಡಬ್ಲ್ಯೂ -01
ಪಿ.ಡಬ್ಲ್ಯೂ-01

ಸಾಕ್ಷಿದಾರನ ಹೆಸರು :- ಸುರೇಶ್
ತಂದೆಯ ಹೆಸರು :- ಚಿಕ್ಕಪ್ಪ
ವಯಸ್ಸು :- 45 ವರ್ಷ
ಉದ್ಯೋಗ :- ವ್ಯವಸಾಯ
ವಾಸ :- ಹುನುಗನಹಳ್ಳಿ

**ಸಾಕ್ಷಿಗೆ ದಿಃ 24.11.2025 ರಂದು ಪ್ರಮಾಣ ವಚನ ಬೋದಿಸಲಾಯಿತು.**

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.**

ನನಗೆ ಪ್ರಕರಣದ ಬಗ್ಗೆ ಏನು ಮಾಹಿತಿ ಇಲ್ಲ ನಾನು ಪೋಲಿಸರ ಮುಂದೆ ಹೇಳಿಕೆ ನೀಡಿಲ್ಲ.

**ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲಿಗಾಗಿ ನ್ಯಾಯಾಲಯದ ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಗಿದೆ.**

**ಪಾಟೀ ಸವಾಲುಃ- ಮಾನ್ಯ ಸ.ಸ.ಅ ರವರಿಂದ.**

ದಿಃ 23.03.2023 ರಂದು ಮದ್ಯಾಹ್ನ 3 ಗಂಟೆಯ ಸಮಯದಲ್ಲಿ ನಾನು ಕೆಲಸದ ನಿಮಿತ್ಯ ನಮ್ಮ ಊರಿನ ಚಾಸಾ 2 ಅವರ ಜಮೀನಿನ ನೇರದಲ್ಲಿ ಹೋಗುವಾಗ ಆರೋಪಿ ಚಾಸಾ 2 ಅವರಿಗೆ ಅವಾಚ್ಯ ಶಬ್ದಗಳಿಂದ ಬೈಯುತ್ತಿದ್ದು ನಂತರ ಅಲ್ಲಿ ಇದ್ದ ಮರ ಕೊಂಬೆ ಕಿತ್ತುಕೊಂಡು ತಲೆ ಮತ್ತು ಮೈಕೈಗೆ ಹೊಡೆದಿದ್ದುನಾನು ಜಗಳ ಬಿಡಿಸಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ 2 ಅವರಿಗೆ ವಿಚಾರ ಮಾಡಲಾಗಿ ಅವರ ಜಮೀನಿನ ಪಕ್ಕದಲ್ಲಿರುವ ಟ್ರಾನ್ಸಫರ್ಮ ಹತ್ತಿರ ಇರುವ ಬದುವಿಗೆ ಬೆಂಕಿ ಬಿದ್ದಿದ್ದು ನಾನು ಯಾರೂ ಬದುವಿಗೆ ಬೆಂಕಿ ಹಚ್ಚಿದ್ದಾರೆಂದು ಕೂಗಿಕೊಂಡಾಗ ಆರೋಪಿ ಬಂದು ನನ್ನ ಮೇಲೆ ಈ ರೀತಿ ಗಲಾಟೆ ಮಾಡಿರುತ್ತಾರೆಂದು ಹೇಳಿತ್ತಾರೆ ನಂತರ ನಾನು ಚಾಸಾ 2 ಅವರ ಮಳಿಗೆ ವಿಷಯ ತಿಳಿಸಿರುತ್ತೇನೆ ಎಂದರೆ ಸರಿಯಲ್ಲ.

ದಿಃ 30.03.2023 ರಂದು ನಾನು ನನ್ನ ಹೇಳಿಕೆ ನೀಡಿರುತ್ತೇನೆಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿ.ಪಿ 3 ಎಂದು ಗುರುತಿಸಲಾಯಿತು. ನನಗೆ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದ್ದರೂ ನಾನು ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ಪಾಟೀ ಸವಾಲು ಇಲ್ಲವೆಂದು ನಿವೇದಿಸಿಕೊಂಡಿರುತ್ತಾರೆ.**

**ಮರು ವಿಚಾರಣೆ ಇಲ್ಲಃ**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ/-

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.

ಕುಣಿಗಲ್.